ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1031
ಸದಸ್ಯರ ಹೆಸರು : ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 25-02-2022.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಪಂಚಾಯತಿ ವ್ಯಾಪ್ತಿಯಲ್ಲಿ ಸ್ವತ್ತು ಮತ್ತು ಇ-ಸ್ವತ್ತುಗಳಲ್ಲಿ ಆಗುತ್ತಿರುವ ಅಕ್ರಮಗಳಿಗೆ ತಡೆ ನೀಡಿ. ನಾನಾ ಸುಧಾರಣಾ ಕ್ರಮಗಳನ್ನು ಜಾರಿಗೆ ತರಲು ನಿವೃತ್ತ ಐ.ಎ.ಎಸ್.ಅಧಿಕಾರಿ ಶ್ರೀ ಕೆ.ಹೆಚ್.ಗೋಪಾಲಕೃಷ್ಣಗೌಡ ನೇತೃತ್ವದ ಸಮಿತಿ 2017 ರಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಿ. ಸದರಿ ವರದಿಯನ್ನು ಇದುವರೆಗೂ ಜಾರಿಗೊಳಿಸದಿರಲು ಕಾರಣವೇನು.	ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 690 ಗ್ರಾಪಂಅ 2015 ದಿನಾಂಕ:05-04-2017 ರಲ್ಲಿ ಬೆಂಗಳೂರು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ, ಮೋಸ ಹಾಗೂ ಅನಾನುಕೂಲತೆಗಳ ಬಗ್ಗೆ ಬಂದಿರುವ ದೂರುಗಳ ಹಿನ್ನೆಲೆಯಲ್ಲಿ ನಿವೃತ್ತ ಭಾರತೀಯ ಆಡಳಿತ ಸೇವೆ (ಐ.ಎ.ಎಸ್.) ಅಧಿಕಾರಿಯಾದ ಶ್ರೀ ಕೆ.ಹೆಚ್. ಗೋಪಾಲಕೃಷ್ಣೇಗೌಡರ ರವರ ಅಧ್ಯಕ್ಷತೆಯಲ್ಲಿ ಸಮಿತಿ ರಚನೆ ಮಾಡಿ ಆದೇಶಿಸಲಾಗಿತ್ತು. ಈ ಸಮಿತಿಯು ದಿನಾಂಕ:05-02-2018 ರಂದು ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತದೆ. ಈ ವರದಿಯ ಬಗ್ಗೆ ಸರ್ಕಾರದ ಕಾರ್ಯದರ್ಶಿಗಳು, (ಪಂಚಾಯತ್ ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ: 20-09-2018 ರಂದು ಸಭೆ ನಡೆಸಿ ತೀರ್ಮಾನ ತೆಗೆದುಕೊಂಡು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಇ-ಸ್ವತ್ತು ತಂತ್ರಾಂಶಕ್ಕೆ ಸಂಬಂಧಿಸಿದ ಸಮಸ್ಯೆಗಳಿಗೆ ಬದಲಾವಣೆ ಮಾಡಲು ಎನ್.ಐ.ಸಿ. ರವರಿಗೆ ತಿಳಿಸಲಾಗಿದೆ. ಕಂದಾಯ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಅರಣ್ಯ ಇಲಾಖೆ ಮತ್ತು ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಹಾಗೂ ವಸತಿ ಇಲಾಖೆಗಳಿಗೆ ಸಂಬಂಧಿಸಿದ ಸಮಸ್ಯೆಗಳ ಬಗ್ಗೆ ಪರಿಹಾರ ಕ್ರಮ ಕೈಗೊಳ್ಳಲು ಸಂಬಂಧಿಸಿದ ಇಲಾಖೆಗಳಿಗೆ ತಿಳಿಸಲಾಗಿದೆ.
(ಆ)	ಸರ್ಕಾರದ ಈ ವಿಳಂಬ ನೀತಿಯಿಂದಾಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸರ್ವೆ ಮತ್ತು ಆಸ್ತಿ ಹಕ್ಕು ಪುನರ್ ವಸತಿ ಕೇಂದ್ರ ಇ-ಸ್ವತ್ತು ಸರ್ಕಾರಿ ಜಾಗದಲ್ಲಿ ಅಧಿಕೃತ ಮನೆಗಳ ಸಕ್ರಮಕ್ಕೆ ಬಾಕಿ ಇರುವ ಅರ್ಜಿಗಳ ಇತ್ಯರ್ಥ, ಅರಣ್ಯ ಹಕ್ಕು ಕಾಯ್ದೆ ಅಡಿ ಬಾಕಿ ಇರುವ ಅರ್ಜಿ ಇತ್ಯರ್ಥ ಹೀಗೆ ಹತ್ತು ಹಲವು ಜನೋಪಯೋಗಿ ಸರ್ಕಾರಿ ಕಾರ್ಯಕ್ರಮಗಳು ಸ್ಥಗಿತಗೊಂಡಿದ್ದು, ಸದರಿ ವರದಿಯನ್ನು ತುರ್ತಾಗಿ ಜಾರಿಗೊಳಿಸುವ ಪ್ರಸ್ತಾವನೆ/ ನಿರ್ಧಾರ ಸರ್ಕಾರ ಕೈಗೊಳ್ಳುವುದೇ; (ಸಂಪೂರ್ಣ ಮಾಹಿತಿ ಒದಗಿಸುವುದು)	
(ಇ)	ನಿವೃತ್ತ ಅಧಿಕಾರಿ ಶ್ರೀ ಕೆ.ಹೆಚ್. ಗೋಪಾಲಕೃಷ್ಣಗೌಡ ರವರು 2017ರಲ್ಲಿ ಸಲ್ಲಿಸಿದ ವರದಿಯ ಶಿಫಾರಸ್ಸುಗಳೇನು? (ವರದಿಯ ವಿವರ/ಪ್ರತಿಯನ್ನು ನೀಡುವುದು)	ವರದಿಯ ಶಿಫಾರಸ್ಸಿನ ಪ್ರತಿಯನ್ನು ಅನುಬಂಧದಲ್ಲಿ ನೀಡಿದೆ.

ಸಂ. ಗ್ರಾಅಪ 71 ಗ್ರಾಪಂಅ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.